## ರಾಜ್ಯದಲ್ಲಿ ಹೊಸದಾಗಿ ಪದವಿ ಕಾಲೇಜುಗಳ ಮಂಜೂರಾತಿ

**82 (135) ಶ್ರೀ ಗೂಳಿಹಟ್ಟಿ ಡಿ. ಶೇಖರ (ಹೊಸದುರ್ಗ) :** ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಹೊಸದಾಗಿ ಪದವಿ ಕಾಲೇಜುಗಳನ್ನು ಮಂಜೂರು ಮಾಡುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ;

ಆ) ರಾಜ್ಯದಲ್ಲಿ ಅತಿಕಡಿಮೆ 50 ವಿದ್ಯಾರ್ಥಿಗಳ ಸಂಖ್ಯೆಯಲ್ಲಿರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟಿದೆ;

ಇ) ರಾಜ್ಯದಲ್ಲಿ ಅತಿಹೆಚ್ಚು ವಿದ್ಯಾರ್ಥಿಗಳ ಸಂಖ್ಯೆಯಲ್ಲಿರುವ ಪದವಿ (ಅವಶ್ಯವಿರುವ) ಕಾಲೇಜುಗಳ ಸಂಖ್ಯೆ ಎಷ್ಟು;

ಈ) ಮಹಿಳಾ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಮಹಿಳಾ ಪದವಿ ಕಾಲೇಜು ಆರಂಭಿಸಲು ಸರ್ಕಾರವು ಚಿಂತನೆ ನಡೆಸಿದಯೇ?

**ಡಾ॥ ವಿ.ಎಸ್. ಆಚಾರ್ಯ** (ಉನ್ನತ ಶಿಕ್ಷಣ ಸಚಿವರು):–

ಅ) ಇಲ್ಲ

ಆ) 03

ಇ) 14

ಈ) 23 ಚಿಂತನೆ ನಡೆಸಿಲ್ಲ

## ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳಿಗೆ ಭೋಧಕೇತರ ಹುದ್ದೆಗಳ ಭರ್ತಿ

**84 (307) ಶ್ರೀ ಹಾಲಪ್ಪ ಹೆಚ್ (ಸೊರಬ) :** ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಪ್ರಥಮ ದರ್ಜೆ, ದ್ವಿತೀಯ ದರ್ಜೆ, ಸಹಾಯಕರು ಹಾಗೂ 'ಡಿ' ಗುಂಪಿನ ನೌಕರರ ಸಂಖ್ಯೆ ಎಷ್ಟು (ಕಾಲೇಜುವಾರು, ಪ್ರೌಢ ಶಾಲಾವಾರು ಮತ್ತು ಹುದ್ದೆವಾರು ಪ್ರತ್ಯೇಕ ಮಾಹಿತಿ ನೀಡುವುದು)

ಆ) ಶಾಲಾ ಆಡಳಿತ ವರ್ಗಕ್ಕೆ ಮತ್ತು ವಿದ್ಯಾರ್ಥಿಗಳಿಗೆ ಇದರಿಂದ ತುಂಬಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;